1	2	3	4	5	6	7
19. Kolar	114	47	89	38	82	54
20. Koppal	016	07	11	04	07	08
21. Mandya	056	26	45	32	54	31
22. Mysore	067	56	76	55	67	53
23. Raichur	043	28	35	15	20	26
24. Shimoga	082	30	44	25	55	33
25. Tumkur	099	35	74	24	80	41
26. Udupi	057	38	44	38	49	40
27. Uttar Kannada	022	26	26	20	35	31

ಗ್ರಾಮೀಣ ಪ್ರದೇಶಗಳಲ್ಲಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಪ್ರತಿಭಾನ್ವಿತ ಶಿಕ್ಷಕರಿಂದ ಪಾಠ ಪ್ರವಚನ

1244(1394) ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಹಿತಿ ತಂತ್ರಜ್ಞಾನ ಬಳಸಿಕೊಂಡು ಗ್ರಾಮೀಣ ಪ್ರದೇಶದಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿರುವ ವಿದ್ಯಾರ್ಥಿಗಳಿಗೆ ಬೆಂಗಳೂರಿನಂತಹ ನಗರ ಪ್ರದೇಶಗಳಲ್ಲಿ ವಾಸಿಸುವ ಪ್ರತಿಭಾನ್ವಿತ ಶಿಕ್ಷಕರಿಂದ ಪಾಠ ಪ್ರವಚನ ಮಾಡಿಸುವ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಆ) ಈ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಇ) ಈ ಉದ್ದೇಶ ಸಾಧಿಸಲು ಬೇಕಾಗಿರುವ ಅವಧಿಯೆಷ್ಟು?

ಈ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟಾಗಬಹುದು?

ಪೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ರಾಜ್ಯ ಸಚಿವರು): ಅ) ಇಂತಹ ಯೋಜನೆಯನ್ನು ಈಗಾಗಲೇ ಕಳೆದ ವರ್ಷಗಳಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ಆ) 2002-03ನೇ ಸಾಲಿಗೆ ಸಂಬಂಧಿಸಿದಂತೆ ಈ ಯೋಜನಾ ಕಾರ್ಯಕ್ರಮಕ್ಕೆ 44.00 ಲಕ್ಷ ರೂ.ಗಳನ್ನು ಹಂಚಿಕೆ ಮಾಡಲಾಗಿದೆ.

ಗದಗ್ ಕ್ಷೇತ್ರದ ಹುಲಕೋಟಿಯಲ್ಲಿ ಮಹಿಳೆಯರಿಗೆ ಮಹಾವಿದ್ಯಾಲಯ ಪ್ರಾರಂಭ

1245 (1395) ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ಮತ ಕ್ಷೇತ್ರದ ಹುಲಕೋಟಿ ಗ್ರಾಮದಲ್ಲಿ ಮಹಿಳೆಯರಿಗಾಗಿ ಪದವಿ ಮಹಾವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿರುವುದು ಯಾವಾಗ;

ಆ) ಈ ಮಹಾ ವಿದ್ಯಾಲಯವನ್ನು ಆ ಭಾಗದ ಬಾಲಕಿಯರ ಅನುಕೂಲಕ್ಕಾಗಿ ಇದೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದೇ?

ಡಾ।। ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) 2000-2001ನೇ ಸಾಲಿನಲ್ಲಿ

ಆ) ಇಲ್ಲ.

ವಸತಿ ಯೋಜನೆಯ ಮನೆಗಳ ವಿವರ

1246 (1428) ಶ್ರೀ ಪಾಟೀಲ್ ಶಿವಾನಂದ ಸಿದ್ಧರಾಮಗೌಡ (ತಿಕೋಟ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1999-2000 ಹಾಗೂ 2000-2001 ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಯಡಿ (ಆಶ್ರಯ, ಅಂಬೇಡ್ಕರ್, ಇಂದಿರಾ ಆವಾಸ್) ಎಷ್ಟು ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿತ್ತು; ಅವುಗಳಲ್ಲಿ ಒಟ್ಟು ಎಷ್ಟು ಮನೆಗಳು ಪೂರ್ಣಗೊಂಡಿವೆ; ಎಷ್ಟು ಮನೆಗಳು ಅಪೂರ್ಣಗೊಂಡಿವೆ; ಅವು ಯಾವ ಹಂತದಲ್ಲಿವೆ;

ಆ) ವಿಜಾಪುರ ಜಿಲ್ಲೆಯ ಪ್ರತಿ ವಿಧಾನ ಸಭಾ ಮತ ಕ್ಷೇತ್ರದಲ್ಲಿ 1999-2000, 2000-2001ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಯಡಿ ಎಷ್ಟು ಮನೆಗಳು ಮಂಜೂರಾಗಿವೆ ಹಾಗೂ ಎಷ್ಟು ಮನೆಗಳನ್ನು ಹಂಚಲಾಗಿದೆ;

ಇ) ಈಗಾಗಲೇ ಪ್ರತಿಯೊಂದು ವಿಧಾನ ಸಭಾ ಮತ ಕ್ಷೇತ್ರಗಳಲ್ಲಿ ಪೂರ್ತಿಗೊಂಡ ಮನೆಗಳೆಷ್ಟು; ಅಪೂರ್ಣಗೊಂಡ ಮನೆಗಳೆಷ್ಟು; ಅವು ಯಾವ ಹಂತದಲ್ಲಿವೆ; ಪ್ರತಿ ವಿಧಾನ ಸಭಾ ಮತ ಕ್ಷೇತ್ರಗಳಲ್ಲಿ ಈ ಮನೆಗಳನ್ನು ಹಂಚಲಾದ ಫಲಾನುಭವಿಗಳ ಪಟ್ಟಿ ಒದಗಿಸುವುದು ಮತ್ತು ಜಿಲ್ಲೆಗೆ ಈ ಯೋಜನೆಗೆ ಮಂಜೂರಾದ ಹಣ ಎಷ್ಟು; ಬಿಡುಗಡೆಯಾದ ಹಣವೆಷ್ಟು; ವಿಧಾನಸಭಾ ಕ್ಷೇತ್ರವಾರು ವಿವರ ಒದಗಿಸುವುದು.

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು) :

ಅ) ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಆ) ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಇ) ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಫಲಾನುಭವಿಗಳ ಪಟ್ಟಿಯು ಜಿಲ್ಲಾಧಿಕಾರಿಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಹಾಗೂ (ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ನಗರಸಭೆ / ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳ ಕಛೇರಿಯಲ್ಲಿ ಸಾರ್ವಜನಿಕವಾಗಿ ಲಭ್ಯವಿದೆ.